ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ: ೩೦ -೦೭ -2021ರ ನಡವಳಿಗಳು

ವಿಷಯದ ಸಂಖ್ಯೆ: 212/2021-22

ಪ್ರಸ್ತಾವನೆ :

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ 2020-21ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ ಪಿ-3075ರ ಅಭಿವೃದ್ಧಿ ಕಾಮಗಾರಿ ಯೋಜನೆಯಡಿ Development of Foothpath on Major Sandeep Unnikrishnan Road and Resurfacing of roads at Judicial layout in ward NO 04 of Yelahanka Division (Package -10) ಎಂಬ ಕಾಮಗಾರಿಗೆ ಅಂದಾಜು ಮೊತ್ತ ರೂ.500.00 ಲಕ್ಷಗಳಿಗೆ ಜಾಬ್ ಸಂಖ್ಯೆ: 004-21-000035 ರಂತೆ ನೀಡಲಾಗಿರುತ್ತದೆ.

ಸದರಿ ಕಾಮಗಾರಿಯನ್ನು ಕೈಗೊಳ್ಳಲು ರೂ.500.00 ಲಕ್ಷಗಳಿಗೆ 2018-19ನೇ ಸಾಲಿನ ಲೋಕೋಪಯೋಗಿ ಇಲಾಖೆ ಮತ್ತು ಅನುಮೋದಿತ ದರಗಳ ದರಪಟ್ಟಿಯಂತೆ ಅಂದಾಜು ಪಟ್ಟಿಯನ್ನು ತಯಾರಿಸಲಾಗಿರುತ್ತದೆ. ಸದರಿ ಕಾಮಗಾರಿಯನ್ನು ಸಾರ್ವಜನಿಕ ಸೇವಾ ಹಿತದೃಷ್ಟಿಯಿಂದ ತುರ್ತಾಗಿ ಕೈಗೊಳ್ಳಬೇಕಾಗಿದ್ದರಿಂದ ಸಕ್ಷಮ ಪ್ರಾಧಿಕಾರದಿಂದ ಆಡಳಿತಾತ್ಮಕ ಮಂಜೂರಾತಿಯನ್ನು ನಿರೀಕ್ಷಿಸಿ ಕಾರ್ಯಪಾಲಕ ಅಭಿಯಂತರರು, ಯಲಹಂಕ ವಿಭಾಗ ರವರು ದಿನಾಂಕ:21-04-2021 ರಂದು ಟೆಂಡರ್ ಆಹ್ವಾನಿಸಿರುತ್ತಾರೆ.

ಸದರಿ ಕಾಮಗಾರಿಯ ಟೆಂಡರ್‌ಗೆ ಸಂಬಂಧಿಸಿದಂತೆ ತಾಂತ್ರಿಕ ಬಿಡ್ ಅನ್ನು ದಿನಾಂಕ: 15-05-2021 ರಂದು ತೆರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಇಬ್ಬರು ಬಿಡ್‌ದಾರರಾದ 1) Sri.Yashwanth Gowda H.S (M/s SLP Infra Engineers Pvt Ltd) & 2) Sri Ramesh Thammannagowda (M/s Ganapathi Stone Crusher) ರವರು ಭಾಗವಹಿಸಿದ್ದು, ತಾಂತ್ರಿಕವಾಗಿ ಅರ್ಹರಾಗಿರುವ ಬಿಡ್ದುದಾರರ ಆರ್ಥಿಕ ಬಿಡ್ ಅನ್ನು ತೆರೆಯಲು ಮುಖ್ಯ ಅಭಿಯಂತರರು ಯಲಹಂಕ ವಲಯ ರವರು ಅನುಮೋದಿಸಿರುವಂತೆ ದಿನಾಂಕ: 02-07-2021 ರಂದು ಆರ್ಥಿಕ ಬಿಡ್ ಅನ್ನು ತೆರೆಯಲಾಗಿದ್ದು, ವಿವರ ಕೆಳಕಂಡಂತೆ ಇರುತ್ತದೆ.

ಕ್ರ ಸಂ	ಗುತ್ತಿಗೆದಾರರ ಹೆಸರು	ಟೆಂಡರ್‌ಗಿಟ್ಟ ಮೊತ್ತ	ಟೆಂಡರ್ ಗಿಟ್ಟ ಮೊತ್ತವನ್ನು ದಿ.1-2-2021ರ ಪರಿಷ್ಕೃತ ದರಗಳಿಗೆ ಹೋಲಿಸಿದಾಗ	ಗುತ್ತಿಗೆದಾರರು ನಮೂದಿಸಿರುವ ದರಗಳು	ಟೆಂಡರ್‌ಗಿಟ್ಟ ಮೊತ್ತಕ್ಕೆ ಹೊಲಿಸಿದಾಗ ಶೇಕಡವಾರು	ದಿನಾಂಕ: 1-2-2021ರ ಪರಿಷ್ಕೃತ ದರಗಳಿಗೆ ಹೋಲಿಸಿದಾಗ ಶೇಕಡ	ದರ ಸಂದಾನದ ನಂತರ ಗುತ್ತಿಗೆದಾರರು ನಮೂದಿಸಿರುವ ದರಗಳು
01	Sri Yashwanth Gowda H.S (M/s SLP Infra Engineers Pvt Ltd)	4,19,58,800.86	4,19,58,800.86	4,61,10,950.53	(+)9.90%	(+)9.90%	4,40,35,761.51 (+4.95%)
02	Sri Ramesh Thammannagowda (M/s Ganapathi Stone Crusher)			4,74,87,517.45	(+)13.18%	(+)13.18%	-

ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿದೆ.

1. ಪ್ರಸ್ತಾಪಿತ ಕಾಮಗಾರಿಗಳ ಸ್ಥಳ ಪರಿವೀಕ್ಷಣೆ ಮಾಡಿ ಕಾಮಗಾರಿಯ ಅವಶ್ಯಕತೆ ಬಗ್ಗೆ ಹಾಗೂ ಸದರಿ ಕಾಮಗಾರಿಯನ್ನು ಪಾಲಿಕೆಯ ಹಿಂದಿನ ಆಯವ್ಯಯಗಳಲ್ಲಿ/ಅನುದಾನಗಳಲ್ಲಿ ಕೈಗೊಂಡಿಲ್ಲದೇ ಇರುವ ಮತ್ತು ಪುನಾರಾವರ್ತನೆಯಾಗದೇ ಇರುವುದನ್ನು ವಿಚಿತ ಪಡಿಸಿಕೊಳ್ಳುವುದು.

2. ಕಾಮಗಾರಿಯನ್ನು ಅನುಷ್ಠಾನಗೊಳಿಸುವ ಪೂರ್ವದಲ್ಲಿ, ಆಯುಕ್ತರವರ ಕಛೇರಿ ಆದೇಶ ಸಂಖ್ಯೆ:ಮುಲೆಅ/ಆಯವ್ಯಯ/2019-20/ಪಿಆರ್/11/2018-19, ದಿನಾಂಕ:12-06-2019 ಮತ್ತು ಆಯುಕ್ತರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ:ಬಿಬಿಎಂಪಿ/ಆ/ಪಿ.ಆರ್/5287/2019-20, ದಿನಾಂಕ:05-11-2019 ಮತ್ತು ಬಿಬಿಎಂಪಿ/ಆ/ ಪಿ.ಆರ್/6166/2019-20 ದಿನಾಂಕ:13-12-2019 ರಲ್ಲಿನ ನಿರ್ದೇಶನಗಳನ್ನು / ಪ್ರಕ್ರಿಯೆಗಳನ್ನು ಅನುಸರಿಸತಕ್ಕದ್ದು.

3. ಕಾಮಗಾರಿಗೂ ಮುನ್ನ ಹಾಗೂ ನಂತರದ ಜಿ.ಪಿ.ಎಸ್.ಯುಳ್ಳ ಛಾಯಚಿತ್ರಗಳನ್ನು ಸಲ್ಲಿಸತಕ್ಕದ್ದು.

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಅನುಮೋದನೆ ನೀಡಲು ಕೋರುತ್ತಾ, ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಸೂಕ್ತ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ವಿಶೇಷ ಆಯುಕ್ತರು (ಆಡಳಿತ) ಹಾಗೂ ವಲಯ ಆಯುಕ್ತರು (ಯಲಹಂಕ)ರವರ ದಿನಾಂಕ:26-07-2021ರ ಟಿಪ್ಪಣಿ.

1. ಸದರಿ ಕಾಮಗಾರಿಯ ಅಂದಾಜು ಮೊತ್ತ ರೂ.500.00 ಲಕ್ಷಗಳಿಗೆ ಬಿ.ಬಿ.ಎಂ.ಪಿ ಕೌನ್ಸಿಲ್ ಸಭೆಯ ಆಡಳಿತಾತ್ಮಕ ಅನುಮೋದನೆಯನ್ನು ನಿರೀಕ್ಷಿಸಿ ಟೆಂಡರ್ ಅಹ್ವಾನಿಸಲಾಗಿರುವುದರಿಂದ, ಘಟನೋತ್ತರ ಆಡಳಿತಾತ್ಮಕ ಅನುಮೋದನೆ.

2. ಸದರಿ ಕಾಮಗಾರಿಯನ್ನು ಸಾರ್ವಜನಿಕರ ಹಿತದೃಷ್ಟಿಯಿಂದ ತುರ್ತಾಗಿ ಕೈಗೊಳ್ಳಬೇಕಾಗಿರುವುದರಿಂದ ಗುತ್ತಿಗೆದಾರಾದ Sri Yashwanth Gowda H.S (M/s SLP Infra Engineers Pvt Ltd) ರವರು ನಮೂದಿಸಿರುವ ದರ ಸಂದಾನದ ಮೊತ್ತವಾದ ರೂ.4,40,35,761.51 ಗಳನ್ನು ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇ.4.95% ರಷ್ಟು ಅಧಿಕ ಟೆಂಡರ್ ಪ್ರಿಮಿಯಂಗೆ (2018-19ನೇ ಸಾಲಿನ ಎಸ್.ಆರ್. ದರಪಟ್ಟಿಯಂತೆ) ಅನುಮೋದನೆ.

ತೀರ್ಮಾನ: ವಲಯ ಆಯುಕ್ತರು (ಯಲಹಂಕ) ರವರ ದಿನಾಂಕ:26-07-2021ರ ಟಿಪ್ಪಣಿಯನ್ನು ಒಪ್ಪಿದೆ.

(ರಾಕೇಶ್ ಸಿಂಗ್)
ಆಡಳಿತಗಾರರು